**ಸಾಕ್ಷಿಯನ್ನು ದಿನಾಂಕಃ 18 .06.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ**

ನಾನು ಈ ದಿನ ನನ್ನ ಮುಖ್ಯ ವಿಚಾರಣೆಯ ಬಾಬ್ತು ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಅಂಶಗಳು ಮತ್ತು ಸಂಗತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ನಿಪಿಃ 1 ರ ಕ್ರಯ ಕರಾರು ಪತ್ರವನ್ನು ಪ್ರತಿವಾದಿಯರು ವಾದಿಗೆ ಬರೆದುಕೊಟ್ಟಿದ್ದು, ನನಗೆ ಈಗ ನಿಪಿಃ1 ರ ದಾಖಲೆ ತೋರಿಸುತ್ತಿದ್ದು ಅದರಲ್ಲಿ ಪ್ರತಿವಾದಿಯರ ಸಹಿಗಳು ಇವೆ. ಸದರಿ ಸಹಿಗಳನ್ನು ಈಗಾಗಲೇ ನಿಪಿಃ1(ಎ) ರಿಂದ (ಇ) ಎಂದು ಗುರುತಿಸಲಾಗಿದೆ. ನಿಪಿಃ 1 ಕ್ಕೆ ಸಾಕ್ಷಿದಾರರಾಗಿ ನಾನು ಮತ್ತು ರಾಮಪ್ಪ ಎನ್ನುವವರು ಸಹಿ ಹಾಕಿದ್ದು ಈಗ ನಾನು ನಿಪಿಃ1 ರ ಮೇಲೆ ಇರುವ ನನ್ನ ಮತ್ತು ರಾಮಪ್ಪ ರವರ ಸಹಿಗಳನ್ನು ನೋಡಿ ಗುರುತಿಸುತ್ತಿದ್ದೇನೆ. ಸದರಿ ಸಹಿಗಳನ್ನು ಈಗಾಗಲೇ ನಿಪಿಃ1(ಎಫ್) ಮತ್ತು 1(ಜಿ ) ಎಂದು ಗುರುತಿಸಲಾಗಿದೆ. ನಿಪಿಃ1 ರ ಪತ್ರ ಬರಹಗಾರರಾಗಿ ಚೆಲುವರಾಜು ರವರು ಸಹಿ ಮಾಡಿದ್ದು ಸದರಿ ಸಹಿಯನ್ನು ನಾನು ಈಗ ನೋಡುತ್ತಿದ್ದೇನೆ. ಸದರಿ ಸಹಿಯನ್ನು ನಿಡಿಃ1 (ಹೆಚ್) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಪ್ರತಿವಾದಿಯರ ಪರ ಶ್ರೀ ಬಿ ಎಸ್ ಎನ್ ವಕೀಲರು ಪಾಟೀ ಸವಾಲಿಗಾಗಿ ಸಮಯ ಕೋರಿದ್ದು ಸಮಯ ನೀಡಿ ಮುಂದೂಡಲಾಯಿತು.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ. ಹೇ.ಕೇ. ಸರಿ ಇದೆ

1 ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,

ಮದ್ದೂರು.